# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 2156 (2622) |
| ಮಾನ್ಯ ಸದಸ್ಯರ ಹೆಸರು | ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 24/03/2022 |
| ಉತ್ತರಿಸುವ ಸಚಿವರು | ಮಾನ್ಯ ಕಾರ್ಮಿಕ ಸಚಿವರು |

| ಕ್ರ ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಕಾರ್ಮಿಕ ಇಲಾಖೆಯಿಂದ ಪ್ರಸ್ತುತ ಜಾರಿ ಮಾಡಲಾಗುತ್ತಿರುವ ಯೋಜನೆಗಳು ಯಾವುವು; | ಕಾರ್ಮಿಕ ಇಲಾಖೆಯ ಅಧೀನದಲ್ಲಿ ಕಾರ್ಯ ನಿರ್ವಹಿಸುತ್ತಿರುವ ವಿವಿಧ ಮಂಡಳಿಗಳು ಜಾರಿಗೊಳಿಸುತ್ತಿರುವ ಯೋಜನೆಗಳ ವಿವರಗಳು ಈ ಕೆಳಗಿನಂತಿವೆ:<br><br>**ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ:**<br>ಈ ಮಂಡಳಿಯ ವತಿಯಿಂದ ನೋಂದಾಯಿತ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರು ಮತ್ತು ಅವರ ಅವಲಂಬಿತರಿಗಾಗಿ ರೂಪಿಸಿರುವ 19 ವಿವಿಧ ಕಲ್ಯಾಣ ಮತ್ತು ಸಾಮಾಜಿಕ ಭದ್ರತಾ ಸೌಲಭ್ಯಗಳ ವಿವರವನ್ನು **ಅನುಬಂಧ-01** ರಲ್ಲಿ ಸಲ್ಲಿಸಿದೆ.<br><br>**ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ:**<br>ಕಾರ್ಮಿಕ ಇಲಾಖೆಯ ಅಧೀನದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಯು ಅಸಂಘಟಿತ ಕಾರ್ಮಿಕರಿಗೆ ಸಾಮಾಜಿಕ ಭದ್ರತೆ ಒದಗಿಸಲು ಈ ಕೆಳಕಂಡ ಯೋಜನೆಗಳನ್ನು ಜಾರಿಗೊಳಿಸುತ್ತಿದೆ.<br><br>(1) **ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆ:-**<br>ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರಿಗೆ ಸಂಬಂಧಪಟ್ಟಂತೆ ಈ ಕೆಳಕಂಡ ಸೌಲಭ್ಯಗಳನ್ನು ನೀಡಲಾಗುತ್ತಿದೆ.<br>ಅ) **ಅಪಘಾತ ಪರಿಹಾರ ಸೌಲಭ್ಯ : ಈ** ಯೋಜನೆಯಡಿ, ಅಪಘಾತದಿಂದ ಮರಣ ಹೊಂದಿದ ಪ್ರಕರಣಗಳಲ್ಲಿ ನಾಮ ನಿರ್ದೇಶಿತರಿಗೆ ರೂ. 5 ಲಕ್ಷದ ಪರಿಹಾರ, ಸಂಪೂರ್ಣ ಶಾಶ್ವತ ದುರ್ಬಲತೆ ಪ್ರಕರಣಗಳಲ್ಲಿ ಫಲಾನುಭವಿಗೆ ರೂ.2 ಲಕ್ಷದ ಪರಿಹಾರ ಮತ್ತು ಒಳರೋಗಿಯಾಗಿ ಚಿಕಿತ್ಸೆ ಪಡೆದಲ್ಲಿ ರೂ.1 ಲಕ್ಷದವರೆಗೆ ಚಿಕಿತ್ಸಾ ವೆಚ್ಚದ ಮರುಪಾವತಿ ನೀಡಲಾಗುತ್ತಿದೆ. |

(ಆ) **ಶೈಕ್ಷಣಿಕಧನ ಸಹಾಯ** : ಅಪಘಾತದಿಂದ ನಿಧನರಾದ ಅಥವಾ ಸಂಪೂರ್ಣ ಶಾಶ್ವತ ದುರ್ಬಲತೆ ಹೊಂದಿದ ಫಲಾನುಭವಿಗಳ ಗರಿಷ್ಠ ಇಬ್ಬರು ಮಕ್ಕಳಿಗೆ ಪದವಿಪೂರ್ವ ವ್ಯಾಸಂಗದವರೆಗೆ ವಾರ್ಷಿಕ ತಲಾ ರೂ.10,000/-ಗಳ ಶೈಕ್ಷಣಿಕ ಸಹಾಯಧನ ನೀಡಲಾಗುತ್ತಿದೆ.

(2) <u>ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆ:-</u>

ಈ ಯೋಜನೆಯಡಿ 11 ಅಸಂಘಟಿತ ವರ್ಗಗಳಾದ "ಹಮಾಲರು, ಮನೆಗೆಲಸದವರು, ಚಿಂದಿ ಆಯುವವರು, ಟೈಲರ್ಸ್, ಮೆಕ್ಯಾನಿಕ್, ಅಗಸರು, ಅಕ್ಕಸಾಲಿಗರು, ಕಮ್ಮಾರರು, ಕುಂಬಾರರು, ಕ್ಷೌರಿಕರು ಹಾಗೂ ಭಟ್ಟಿಕಾರ್ಮಿಕ"ರನ್ನು ನೋಂದಾಯಿಸಿ ಗುರುತಿನಚೀಟಿ ನೀಡಲಾಗುತ್ತಿದೆ. ಪ್ರಸ್ತುತ ಆನ್‌ಲೈನ್ ಮೂಲಕ ನೋಂದಾಯಿಸಲು ಅವಕಾಶವಿದ್ದು, ಸ್ಥಳದಲ್ಲೇ ಗುರುತಿನಚೀಟಿ ಪಡೆಯಬಹುದಾಗಿರುತ್ತದೆ. ಯಾವುದೇ ಆರ್ಥಿಕ ಸೌಲಭ್ಯಗಳನ್ನು ನೀಡಲಾಗುತ್ತಿಲ್ಲ.

<u>ಇ-ಶ್ರಮ್ ಕಾರ್ಯಕ್ರಮ:-</u>

ಕೇಂದ್ರ ಸರ್ಕಾರವು ಅಸಂಘಟಿತ ಕಾರ್ಮಿಕರ ಸಮಗ್ರ ರಾಷ್ಟ್ರೀಯ ದತ್ತಾಂಶ (NDUW-National Database for Unorganised Worker) ಕ್ರೋಢೀಕರಿಸಲು ಉದ್ದೇಶಿಸಿದ್ದು, ಸಾಮಾನ್ಯ ಸೇವಾ ಕೇಂದ್ರಗಳ (ಿಖಿಅ) ಸಹಯೋಗದೊಂದಿಗೆ ದಿನಾಂಕ:26-08-2021ರಿಂದ ಸುಮಾರು 379 ವರ್ಗಗಳ ಅಸಂಘಟಿತ ವರ್ಗಗಳ ಕಾರ್ಮಿಕರನ್ನು ಇ-ಶ್ರಮ್ ಪೋರ್ಟಲ್ ಮೂಲಕ ನೋಂದಾಯಿಸಲಾಗುತ್ತಿದೆ. ಈ ಯೋಜನೆಯಡಿ ನೋಂದಣಿಯಾಗುವ ಕಾರ್ಮಿಕರು ಒಂದು ವರ್ಷದ ಅವಧಿಗೆ ಪ್ರಧಾನ ಮಂತ್ರಿ ಸುರಕ್ಷಾ ಬೀಮಾ ಯೋಜನೆಯಡಿ ರೂ.2.00 ಲಕ್ಷಗಳವರೆಗೆ ಅಪಘಾತ ವಿಮೆಯನ್ನು ಪಡೆಯಬಹುದಾಗಿರುತ್ತದೆ ಹಾಗೂ ಒಂದು ವರ್ಷದ ವಿಮಾ ಪ್ರೀಮಿಯಂ ಮೊತ್ತವನ್ನು ಕೇಂದ್ರ ಸರ್ಕಾರವು ಭರಿಸುವುದು.

<u>ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿ:</u>

ಈ ಮಂಡಳಿಯ ವತಿಯಿಂದ ಸಂಘಟಿತ ಕಾರ್ಮಿಕರು ಮತ್ತು ಅವರ ಅವಲಂಬಿತರಿಗೆ ಈ ಕೆಳಕಂಡ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ.

1) **ಕಾರ್ಮಿಕರ ಮಕ್ಕಳಿಗೆ ಶೈಕ್ಷಣಿಕ ಪ್ರೋತ್ಸಾಹ ಧನ ಸಹಾಯ**
2) **ಕಾರ್ಮಿಕರಿಗೆ ವೈದ್ಯಕೀಯ ನೆರವು**
3) **ಕಾರ್ಮಿಕರಿಗೆ ಅಪಘಾತ ಧನ ಸಹಾಯ**
4) **ಅಂಗವಿಕಲ ಕಾರ್ಮಿಕರಿಗೆ ಕೃತಕ ಅಂಗಸಾಧನ ಖರೀದಿಸಲು ಧನ ಸಹಾಯ**
5) **ಮೃತ ಕಾರ್ಮಿಕನ ಅಂತ್ಯ ಸಂಸ್ಕಾರಕ್ಕೆ ಧನ ಸಹಾಯ**

| | | |
|---|---|---|
| | | 6) ವಾರ್ಷಿಕ ವೈದ್ಯಕೀಯ ತಪಾಸಣೆ ಶಿಬಿರ ಹಮ್ಮಿಕೊಳ್ಳುವ ಟ್ರೇಡ್ ಯೂನಿಯನ್/ಸಂಸ್ಥೆಗಳಿಗೆ ಧನಸಹಾಯ<br>7) ವಾರ್ಷಿಕ ಕ್ರೀಡಾ ಕೂಟ ಹಮ್ಮಿಕೊಳ್ಳುವ ನೋಂದಾಯಿತ ಕಾರ್ಮಿಕ ಸಂಘಗಳಿಗೆ ಧನ ಸಹಾಯ<br>8) ಮಹಿಳಾ ಕಾರ್ಮಿಕರಿಗೆ ಹೆರಿಗೆ ಭತ್ಯೆ ಸೌಲಭ್ಯ (2021-22ನೇ ಸಾಲಿನಿಂದ ಅನುಷ್ಠಾನಗೊಳಿಸಲಾಗಿದೆ) |
| ಆ) | ಕಳೆದ 03 ವರ್ಷಗಳಿಂದ ಬೀದರ್ ಜಿಲ್ಲೆಯಲ್ಲಿ ಅಂತಹ ಯೋಜನೆಗಳನ್ನು ಫಲಾನುಭವಿಗಳಿಗೆ ಕಲ್ಪಿಸಲಾಗಿದೆಯೇ: (ತಾಲ್ಲೂಕುವಾರು ವಿವರ ನೀಡುವುದು) | **<u>ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ:</u>**<br>ಈ ಸೌಲಭ್ಯಗಳಡಿ ಬೀದರ್ ಜಿಲ್ಲೆಯಲ್ಲಿ ವಿವಿಧ ಕಲ್ಯಾಣ ಮತ್ತು ಸಾಮಾಜಿಕ ಭದ್ರತಾ ಸೌಲಭ್ಯಗಳಡಿ 41,456 ಫಲಾನುಭವಿಗಳಿಗೆ ಮಂಡಳಿಯ ವತಿಯಿಂದ ಸಹಾಯಧನ ಕಲ್ಪಿಸಲಾಗಿದೆ ಫಲಾನುಭವಿಗಳ ತಾಲ್ಲೂಕುವಾರು ಮಾಹಿತಿಯನ್ನು <u>ಅನುಬಂಧ-2ರಲ್ಲಿ</u> ಸಲ್ಲಿಸಿದೆ.<br>**<u>ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ:</u>**<br>ಬೀದರ್ ಜಿಲ್ಲೆಗೆ ಸಂಬಂಧಿಸಿದಂತೆ, ಈ ಮಂಡಳಿಯು ಜಾರಿಗೊರಿಗೊಳಿಸುತ್ತಿರುವ ಸಾಮಾಜಿಕ ಭದ್ರತಾ ಯೋಜನೆಗಳಡಿ ಸೌಲಭ್ಯ ವಿತರಿಸಿದ ತಾಲ್ಲೂಕುವಾರು ಮಾಹಿತಿಯು ಈ ಕೆಳಕಂಡಂತಿದೆ.<br>**(1) <u>ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರಯೋಜನೆ:-</u>**<br>**(ಅ) ಅಪಘಾತ ಪರಿಹಾರ ಸೌಲಭ್ಯ :** |

| ತಾಲ್ಲೂಕು | 2019-20 | | 2020-21 | | 2021-22 | |
|---|---|---|---|---|---|---|
| | ಪರಿಹಾರದ ಮೊತ್ತ | ಪ್ರಕರಣಗಳ ಸಂಖ್ಯೆ | ಪರಿಹಾರದ ಮೊತ್ತ | ಪರಿಹಾರದ ಮೊತ್ತ | ಪ್ರಕರಣಗಳ ಸಂಖ್ಯೆ | ಪರಿಹಾರದ ಮೊತ್ತ |
| ಔರಾದ್ | – | – | – | – | – | – |
| ಬಸವ ಕಲ್ಯಾಣ | – | – | – | – | 1 | ರೂ.5,00,000 |
| ಭಾಲ್ಕಿ | – | – | – | – | – | – |
| ಬೀದರ್ | – | – | 2 | ರೂ.1000000 | 1 | ರೂ.5,00,000 |
| ಚಿತ್ತಗುಪ್ಪ | – | – | – | – | – | – |
| ಹುಮ್ನಾಬಾದ್ | – | – | – | – | 1 | ರೂ.5,00,000 |
| ಹುಲ್ಸೂರು | – | – | – | – | – | – |
| ಕಮಲ್ ನಗರ | – | – | – | – | – | – |
| ಒಟ್ಟು | – | – | 2 | ರೂ.1000000 | 2 | ರೂ.15,00,000 |

(ಆ)ಶೈಕ್ಷಣಿಕ ಸಹಾಯಧನ :

| ತಾಲ್ಲೂಕು | 2019-20 | | 2020-21 | | 2021-22 | |
|---|---|---|---|---|---|---|
| | ವಿದ್ಯಾರ್ಥಿಗಳ ಸಂಖ್ಯೆ | ಧನ ಸಹಾಯದ ಮೊತ್ತ | ವಿದ್ಯಾರ್ಥಿಗಳ ಸಂಖ್ಯೆ | ಧನ ಸಹಾಯದ ಮೊತ್ತ | ವಿದ್ಯಾರ್ಥಿಗಳ ಸಂಖ್ಯೆ | ಧನ ಸಹಾಯದ ಮೊತ್ತ |
| ಔರಾದ್ | – | – | – | – | – | – |
| ಬಸವಕಲ್ಯಾಣ | – | – | – | – | – | – |
| ಭಾಲ್ಕಿ | – | – | – | – | – | – |
| ಬೀದರ್ | – | – | – | – | – | – |
| ಚಿತ್ತಗುಪ್ಪ | – | – | – | – | – | – |
| ಹುಮ್ನಾಬಾದ್ | 2 | ರೂ.20,000 | 2 | ರೂ.20,000 | 2 | ರೂ.20,000 |
| ಹುಲ್ಸೂರು | – | – | – | – | – | – |
| ಕಮಲ್‌ನಗರ | – | – | – | – | – | – |
| ಒಟ್ಟು | 2 | ರೂ.20,000 | 2 | ರೂ.20,000 | 2 | ರೂ.20,000 |

**ಕೋವಿಡ್–19ರ ವಿಶೇಷ ಪ್ಯಾಕೇಜ್:**

(ಅ) **ಮೊದಲನೆ ಅಲೆ:** ಕೋವಿಡ್–19ರ ಮೊದಲನೆ ಅಲೆಯ ಲಾಕ್‌ಡೌನ್ ಸಂದರ್ಭದಲ್ಲಿ, ಅಗಸ ಮತ್ತುಕ್ಷೌರಿಕ ವೃತ್ತಿ ನಿರ್ವಹಿಸುತ್ತಿರುವ ಅಸಂಘಟಿತ ಕಾರ್ಮಿಕರಿಗೆ ತಲಾ ರೂ.5,000/–ಗಳ ಒಂದು ಬಾರಿಯ ನೆರವನ್ನು ವಿತರಿಸಿದ್ದು, ತಾಲ್ಲೂಕುವಾರು ಮಾಹಿತಿ:–

| ಕ್ರ.ಸಂ | ತಾಲ್ಲೂಕು | ಕಾರ್ಮಿಕರ ಸಂಖ್ಯೆ | ಮೊತ್ತ |
|---|---|---|---|
| 1 | ಔರಾದ್ | 289 | ರೂ.14,45,000 |
| 2 | ಬಸವಕಲ್ಯಾಣ | 491 | ರೂ.24,55,000 |
| 3 | ಭಾಲ್ಕಿ | 436 | ರೂ.21,80,000 |
| 4 | ಬೀದರ್ | 921 | ರೂ.46,05,000 |
| 5 | ಚಿತ್ತಗುಪ್ಪ | 172 | ರೂ.8,60,000 |
| 6 | ಹುಮ್ನಾಬಾದ್ | 368 | ರೂ.18,40,000 |
| 7 | ಹುಲ್ಸೂರು | 70 | ರೂ.3,50,000 |
| 8 | ಕಮಲ್‌ನಗರ | 133 | ರೂ.6,65,000 |
| ಒಟ್ಟು | | **2880** | **ರೂ.1,44,00,000** |

(ಆ) ಎರಡನೇ ಅಲೆ: ಕೋವಿಡ್–19ರ ಎರಡನೇ ಅಲೆಯ ಲಾಕ್‌ಡೌನ್ ಸಂದರ್ಭದಲ್ಲಿ, 11 ವರ್ಗದ ಅಸಂಘಟಿತ ಕಾರ್ಮಿಕರಾದ ಅಗಸರು, ಕ್ಷೌರಿಕರು, ಗೃಹ ಕಾರ್ಮಿಕರು, ಟೈಲರ್ಸ್‌ಗಳು, ಮೆಕ್ಯಾನಿಕ್, ಚಿಂದಿ ಆಯುವವರು, ಹಮಾಲರು, ಅಕ್ಕಸಾಲಿಗರು, ಕಮ್ಮಾರರು, ಕುಂಬಾರರು ಹಾಗೂ ಭಟ್ಟಿಕಾರ್ಮಿಕ ವರ್ಗಕ್ಕೆ ಸೇರಿದ ಕಾರ್ಮಿಕರಿಗೆ ತಲಾ ರೂ.2,000/–ಗಳಂತೆ ಒಂದು ಬಾರಿಯ ನೆರವನ್ನುವಿತರಿಸಿದ್ದು, ತಾಲ್ಲೂಕುವಾರು ಮಾಹಿತಿ:–

| ಕ್ರ.ಸಂ | ತಾಲ್ಲೂಕು | ಕಾರ್ಮಿಕರ ಸಂಖ್ಯೆ | ಮೊತ್ತ |
|---|---|---|---|
| 1 | ಔರಾದ್ | 2150 | ರೂ.4300000 |
| 2 | ಬಸವಕಲ್ಯಾಣ | 11141 | ರೂ.22282000 |
| 3 | ಭಾಲ್ಕಿ | 1840 | ರೂ.3680000 |
| 4 | ಬೀದರ್ | 6726 | ರೂ.13452000 |
| 5 | ಚಿತ್ತಗುಪ್ಪ | 3554 | ರೂ.7108000 |
| 6 | ಹುಮ್ನಾಬಾದ್ | 4021 | ರೂ.8042000 |
| 7 | ಹುಲ್ಸೂರು | 759 | ರೂ.1518000 |
| 8 | ಕಮಲ್‌ನಗರ | 1857 | ರೂ.3714000 |
| ಒಟ್ಟು | | **32048** | ರೂ.64096000 |

**ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿ:**

ಕಳೆದ 3 ವರ್ಷಗಳಲ್ಲಿ ಬೀದರ್ ಜಿಲ್ಲೆಯ ವಿವಿಧ ತಾಲ್ಲೂಕುಗಳಲ್ಲಿ ಸಂಘಟಿತ ಕಾರ್ಮಿಕರು ಮತ್ತು ಅವರ ಅವಲಂಬಿತರಿಗೆ ನೀಡಲಾಗಿರುವ ಸೌಲಭ್ಯಗಳ ವಿವರಗಳನ್ನು **ಅನುಬಂಧ-3** ರಲ್ಲಿ ಒದಗಿಸಲಾಗಿದೆ.

ಇ) ಬೀದರ್ ಜಿಲ್ಲೆಯಲ್ಲಿ ಕಾರ್ಮಿಕ ಇಲಾಖೆಯಲ್ಲಿ ಯಾರ್‍ಯಾರು ಸಂಘಟಿತ ಮತ್ತು ಅಸಂಘಟಿತ ವಲಯದಲ್ಲಿ ತಮ್ಮ ಹೆಸರನ್ನು ನೋಂದಾಯಿಸಿಕೊಂಡಿದ್ದಾರೆ; (ತಾಲ್ಲುಕುವಾರು ವಿವರ ನೀಡುವುದು)

**ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ:**

ಪ್ರಾರಂಭದಿಂದ ಇಲ್ಲಿಯವರೆಗೆ ಬೀದರ್ ಜಿಲ್ಲೆಯಲ್ಲಿ ಅಸಂಘಟಿತ ವಲಯಕ್ಕೆ ಸೇರಿದ ಕಟ್ಟಡ ಮತ್ತು ಇತರೆ ನಿರ್ಮಾಣ ಕಾಮಗಾರಿಗಳಲ್ಲಿ ಕೆಲಸ ನಿರ್ವಹಿಸುವ 1,88,763 ಕಾರ್ಮಿಕರು ಮಂಡಳಿಯ ಫಲಾನುಭವಿಗಳಾಗಿ ನೋಂದಣಿಯಾಗಿರುತ್ತಾರೆ. ಮಂಡಳಿಯವತಿಯಿಂದ ಕಾರ್ಮಿಕರ ನೋಂದಣಿಯನ್ನು ಸೇವಾ ಸಿಂಧು ತಂತ್ರಾಂಶದಲ್ಲಿ ಹಿರಿಯ ಕಾರ್ಮಿಕರು ನಿರೀಕ್ಷಕರು / ಕಾರ್ಮಿಕ ನಿರೀಕ್ಷಕರ ಕಾರ್ಯವ್ಯಾಪ್ತಿವಾರು ನೋಂದಣಿಯನ್ನು ನಿರ್ವಹಿಸಲಾಗುತಿದ್ದು, ಸದರಿ ತಂತ್ರಾಂಶದಲ್ಲಿ ತಾಲ್ಲೂಕುವಾರು ಮಾಹಿತಿಯನ್ನು ನಿರ್ವಹಿಸಿರುವುದಿಲ್ಲ.

ಬೀದರ್ ಜಿಲ್ಲೆಯಲ್ಲಿ ಕಳೆದ ಮೂರು ವರ್ಷದಲ್ಲಿ ಹಿರಿಯ ಕಾರ್ಮಿಕರು ನಿರೀಕ್ಷಕರು / ಕಾರ್ಮಿಕ ನಿರೀಕ್ಷಕರ ಕಾರ್ಯವ್ಯಾಪ್ತಿವಾರು. ನೋಂದಣಿಯಾದ ಫಲಾನುಭವಿಗಳ ವಿವರವನ್ನು ಸಿಡಿಯಲ್ಲಿ ಸಲ್ಲಿಸಿದೆ.

**ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ:**

ಬೀದರ್ ಜಿಲ್ಲೆಗೆ ಸಂಬಂಧಿಸಿದಂತೆ, ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಯು ಜಾರಿಗೊಳಿಸುತ್ತಿರುವವಿವಿಧ ಯೋಜನೆಗಳಡಿ ನೋಂದಾಯಿತರಾದ ಹಾಗೂ ಕೋವಿಡ್-19 ಪರಿಹಾರಕ್ಕಾಗಿಅರ್ಜಿ ಸಲ್ಲಿಸಿದ ಕಾರ್ಮಿಕರವಿವರ ಈ ಕೆಳಗಿನಂತಿದೆ.

(1) **<u>ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆ:-</u>**

ಈ ಯೋಜನೆಯಡಿ. ಖಾಸಗಿ ವಾಣಿಜ್ಯ ಸಾರಿಗೆ ವಾಹನ ಚಲಾಯಿಸಲು ಸಾರಿಗೆ ಇಲಾಖೆಯಿಂದ ಊರ್ಜಿತ ಚಾಲನ ಪತ್ರ ಹೊಂದಿರುವ ಎಲ್ಲಾ ಚಾಲಕರನ್ನು ಫಲಾನುಭವಿಗಳೆಂದು ಪರಿಗಣಿಸಲಾಗುತ್ತಿದ್ದು, ಈ ಮಂಡಳಿಯವತಿಯಿಂದ ಪ್ರತ್ಯೇಕವಾಗಿ ನೋಂದಾಯಿಸುತ್ತಿಲ್ಲ.

(2) **<u>ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆ:-</u>**

ಈ ಯೋಜನೆಯಡಿ 11 ಅಸಂಘಟಿತ ವರ್ಗಗಳಾದ "ಹಮಾಲರು, ಮನೆಗೆಲಸದವರು, ಚಿಂದಿ ಆಯುವವರು, ಟೈಲರ್ಸ್, ಮೆಕ್ಯಾನಿಕ್, ಅಗಸರು, ಅಕ್ಕಸಾಲಿಗರು, ಕಮ್ಮಾರರು, ಕುಂಬಾರರು, ಕ್ಷೌರಿಕರು ಹಾಗೂ ಭಟ್ಟಿಕಾರ್ಮಿಕ"ರನ್ನು ನೋಂದಾಯಿಸಿ ಗುರುತಿನಚೀಟಿ ನೀಡಲಾಗುತ್ತಿದೆ. ಪ್ರಸ್ತುತ ಆನ್‌ಲೈನ್ ಪೋಟಲ್ ಮೂಲಕ ನೋಂದಾಯಿಸಲು ಅವಕಾಶವಿದ್ದು, ಸ್ಥಳದಲ್ಲೇ ಗುರುತಿನ ಚೀಟಿ ಪಡೆಯಬಹುದಾಗಿರುತ್ತದೆ. ಈವರೆಗೆ ಒಟ್ಟು 4,141 ಅಸಂಘಟಿತ ಕಾರ್ಮಿಕರನ್ನು ನೋಂದಾಯಿಸಲಾಗಿದ್ದು, ತಾಲ್ಲೂಕವಾರು ವಿವರವನ್ನು **<u>ಅನುಬಂಧ-4ರಲ್ಲಿ</u>** ಒದಗಿಸಿದೆ.

(3) **<u>ಕೋವಿಡ್-19ರ ವಿಶೇಷ ಪ್ಯಾಕೇಜ್:</u>**

**(ಅ) ಮೊದಲನೆ ಅಲೆ:**

ಕೋವಿಡ್-19ರ ಮೊದಲನೆ ಅಲೆಯ ಲಾಕ್‌ಡೌನ್ ಸಂದರ್ಭದಲ್ಲಿ, ಅಗಸ ಮತ್ತು ಕ್ಷೌರಿಕ ವೃತ್ತಿಯಲ್ಲಿ ನಿರ್ವಹಿಸುತ್ತಿರುವ ಅಸಂಘಟಿತ ಕಾರ್ಮಿಕರು ರೂ.5.000/-ಗಳ ಒಂದು ಬಾರಿಯ ನೆರವು ಕೋರಿ ಒಟ್ಟು 3.881 ಕಾರ್ಮಿಕರು ಅರ್ಜಿ ಸಲ್ಲಿಸಿದ್ದು, ತಾಲ್ಲೂಕವಾರು ವಿವರವನ್ನು **<u>ಅನುಬಂಧ-5 ರಲ್ಲಿ</u>** ಒದಗಿಸಿದೆ.

**(ಆ) ಎರಡನೇ ಅಲೆ:**

ಕೋವಿಡ್-19ರ ಎರಡನೇ ಅಲೆಯ ಲಾಕ್‌ಡೌನ್ ಸಂದರ್ಭದಲ್ಲಿ, 11 ವರ್ಗದ ಅಸಂಘಟಿತ ಕಾರ್ಮಿಕರಾದ ಅಗಸರು. ಕ್ಷೌರಿಕರು, ಗೃಹಕಾರ್ಮಿಕರು. ಟೈಲರ್ಸ್‌ಗಳು, ಮೆಕ್ಯಾನಿಕ್, ಚಿಂದಿ ಆಯುವವರು. ಹಮಾಲರು, ಅಕ್ಕಸಾಲಿಗರು. ಕಮ್ಮಾರರು. ಕುಂಬಾರರು ಹಾಗೂ ಭಟ್ಟಿಕಾರ್ಮಿಕ ವರ್ಗಕ್ಕೆ ಸೇರಿದ ಕಾರ್ಮಿಕರು ರೂ.2,000/-ಗಳ ಒಂದು ಬಾರಿಯ ನೆರವು ಕೋರಿಒಟ್ಟು 56,827 ಕಾರ್ಮಿಕರು ಅರ್ಜಿ ಸಲ್ಲಿಸಿದ್ದು, ತಾಲ್ಲೂಕವಾರು ವಿವರವನ್ನು **<u>ಅನುಬಂಧ-6 ರಲ್ಲಿ</u>** ಒದಗಿಸಿದೆ.

ಮೇಲೆ ವಿವರಿಸಿದಂತೆ ಯೋಜನೆಗಳಡಿ ನೋಂದಾಯಿ: ಅಸಂಘಟಿತ ಕಾರ್ಮಿಕರ ತಾಲ್ಲೂಕುವಾರು ವಿವರ **<u>ಅನುಬಂಧ-4, ಮತ್ತು 6 ಅನ್ನು"CD"</u>** ಮೂಲಕ ಅಡಕಗೊಳಿಸಿ ಒದಗಿಸಲಾಗಿದೆ.

| | | |
|---|---|---|
| ಈ) | ಸದರಿ ಸಂಘಟಿತ ಮತ್ತು ಅಸಂಘಟಿತ ವಲಯದ ನೋಂದಾಯಿತ ಕಾರ್ಮಿಕರಿಗೆ ಸರ್ಕಾರದ ಸೌಲಭ್ಯಗಳನ್ನು ನೀಡಲಾಗಿದೆಯೇ; ನೀಡಿದ್ದಲ್ಲಿ ಆ ಸೌಲಭ್ಯಗಳಾವುವು? | <u>ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ:</u><br>ಕಳೆದ ಮೂರು ವರ್ಷದಲ್ಲಿ ವಿವಿಧ ಸೌಲಭ್ಯಗಳಡಿ ಬೀದರ್ ಜಿಲ್ಲೆಯಲ್ಲಿ ಅಸಂಘಟಿತ ವಲಯದ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರಿಗೆ ಮತ್ತು ಅವರ ಅವಲಂಬಿತರಿಗೆ ಸಹಾಯ ಧನ ನೀಡಲಾಗಿದೆ. ಕಳೆದ ಮೂರು ವರ್ಷದಲ್ಲಿ ಸಹಾಯ ಧನ ಪಡೆದ ಫಲಾನುಭವಿಗಳ ವಿವರವನ್ನು <u>ಅನುಬಂಧ-02</u> ರಲ್ಲಿ ಸಲ್ಲಿಸಿದೆ.<br><br><u>ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ:</u><br>ಮಂಡಳಿಯಲ್ಲಿ ಜಾರಿಗೊಳಿಸುತ್ತಿರುವ ಯೋಜನೆಗಳಡಿ ನೋಂದಾಯಿತ ಅಸಂಘಟಿತ ಕಾರ್ಮಿಕರಿಗೆ ನೀಡಲಾದ ಸೌಲಭ್ಯಗಳ ಮಾಹಿತಿಯನ್ನು ಉಪ ಪ್ರಶ್ನೆ (ಅ) ರಲ್ಲಿ ನೀಡಲಾಗಿದೆ.<br><br><u>ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿ:</u><br>ಸಂಘಟಿತ ಕಾರ್ಮಿಕರು ಮತ್ತು ಅವರ ಅವಲಂಬಿತರಿಗೆ ಈ ಕೆಳಕಂಡ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ.<br>1) ಕಾರ್ಮಿಕರ ಮಕ್ಕಳಿಗೆ ಶೈಕ್ಷಣಿಕ ಪ್ರೋತ್ಸಾಹ ಧನ ಸಹಾಯ<br>2) ಕಾರ್ಮಿಕರಿಗೆ ವೈದ್ಯಕೀಯ ನೆರವು<br>3) ಕಾರ್ಮಿಕರಿಗೆ ಅಪಘಾತ ಧನ ಸಹಾಯ<br>4) ಅಂಗವಿಕಲ ಕಾರ್ಮಿಕರಿಗೆ ಕೃತಕ ಅಂಗಸಾಧನ ಖರೀದಿಸಲು ಧನ ಸಹಾಯ<br>5) ಮೃತ ಕಾರ್ಮಿಕನ ಅಂತ್ಯ ಸಂಸ್ಕಾರಕ್ಕೆ ಧನ ಸಹಾಯ<br>6) ವಾರ್ಷಿಕ ವೈದ್ಯಕೀಯ ತಪಾಸಣೆ ಶಿಬಿರ ಹಮ್ಮಿಕೊಳ್ಳುವ ಟ್ರೇಡ್ ಯೂನಿಯನ್/ಸಂಸ್ಥೆಗಳಿಗೆ ಧನಸಹಾಯ<br>7) ವಾರ್ಷಿಕ ಕ್ರೀಡಾ ಕೂಟ ಹಮ್ಮಿಕೊಳ್ಳುವ ನೊಂದಾಯಿತ ಕಾರ್ಮಿಕ ಸಂಘಗಳಿಗೆ ಧನ ಸಹಾಯ<br>8) ಮಹಿಳಾ ಕಾರ್ಮಿಕರಿಗೆ ಹೆರಿಗೆ ಭತ್ಯೆ ಸೌಲಭ್ಯ (2021-22ನೇ ಸಾಲಿನಿಂದ ಅನುಷ್ಠಾನಗೊಳಿಸಲಾಗಿದೆ) |

**ಕಾಇ 210 ಎಲ್ಇಟಿ 2022**

(ಅರಬೈಲ್ ಶಿವರಾಂ ಹೆಬ್ಬಾರ್)
ಕಾರ್ಮಿಕ ಸಚಿವರು

# ಅನುಬಂಧ-01

## ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಅರವಿಂದ ಕುಮಾರ್ ಅರಳಿ ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 2622 ಕ್ಕೆ

### ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯವತಿಯಿಂದ ರೂಪಿಸಿರುವ ಕಲ್ಯಾಣ ಮತ್ತು ಸಮಾಜಿಕ ಭದ್ರತಾ ಸೌಲಭ್ಯಗಳ ವಿವರ

**ಮಂಡಳಿಯ ನೋಂದಾಯಿತ ಫಲಾನುಭವಿಗಳಿಗೆ ಮತ್ತು ಅವರ ಅವಲಂಭಿತರಿಗೆ ಸಹಾಯ ಧನ ನೀಡಲು ಈ ಕೆಳಕಂಡ 19 ವಿವಿಧ ಕಲ್ಯಾಣ ಮತ್ತು ಸಾಮಾಜಿಕ ಭದ್ರತಾ ಸೌಲಭ್ಯಗಳನ್ನು ರೂಪಿಸಲಾಗಿದೆ:**

1. ಪಿಂಚಣಿ ಸೌಲಭ್ಯ: ಮೂರು ವರ್ಷ ಸದಸ್ಯತ್ವದೊಂದಿಗೆ 60 ವರ್ಷ ಪೂರೈಸಿದ ಫಲಾನುಭವಿಗೆ ಮಾಸಿಕ ರೂ.2,000/-
2. ಕುಟುಂಬ ಪಿಂಚಣಿ ಸೌಲಭ್ಯ: ಮೃತ ಪಿಂಚಣಿದಾರರ ಪತಿ / ಪತ್ನಿ ಮಾಸಿಕ **ರೂ.1000/-**
3. **ದುರ್ಬಲತೆ ಪಿಂಚಣಿ:** ನೋಂದಾಯಿತ ಫಲಾನುಭವಿಯು ಖಾಯಿಲೆಗಳಿಂದ ಅಥವಾ ಕಟ್ಟಡ ಕಾಮಗಾರಿಗಳ ಅಪಘಾತದಿಂದ ಶಾಶ್ವತ/ಭಾಗಶಃ ಅಂಗವಿಕಲತೆ ಹೊಂದಿದ್ದರೆ ಮಾಸಿಕ **ರೂ.2,000/-** ಪಿಂಚಣಿ ಹಾಗೂ ಶೇಕಡವಾರು ದುರ್ಬಲತೆಯನ್ನಾಧರಿಸಿ **ರೂ.2,00,000/-** ದವರೆಗೆ ಅನುಗ್ರಹ ರಾಶಿ ಸಹಾಯಧನ.
4. **ಕನ್ನಡಕ, ಶ್ರವಣಯಂತ್ರ, ಕೃತಕ ಕೈಕಾಲು ಮತ್ತು ಗಾಲಿ ಕುರ್ಚಿ** ಮರುಪಾವತಿ ಸೌಲಭ್ಯ( ಈ ಯೋಜನೆಯನ್ನು ಜಾರಿಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ)
5. **ಟ್ರೈನಿಂಗ್-ಕಮ್-ಟೂಲ್ ಕಿಟ್ ಸೌಲಭ್ಯ (ಶ್ರಮ ಸಾಮರ್ಥ್ಯ) : ರೂ.30,000/- ವರೆಗೆ**
6. **ಶ್ರಮ ಸಂಸಾರ ಸಾಮರ್ಥ್ಯ ತರಬೇತಿ ಸೌಲಭ್ಯ:** ನೋಂದಾಯಿತ ಫಲಾನುಭವಿಯ ಅವಲಂಭಿತರಿಗೆ( ಈ ಯೋಜನೆಯನ್ನು ಜಾರಿಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ)
7. **ವಸತಿ ಸೌಲಭ್ಯ (ಕಾರ್ಮಿಕ ಗೃಹ ಭಾಗ್ಯ): ರೂ.2,00,000/-** ದವರೆಗೆ ಮುಂಗಡ ಸೌಲಭ್ಯ
8. **ಹೆರಿಗೆ ಸೌಲಭ್ಯ (ತಾಯಿ ಲಕ್ಷ್ಮೀ ಬಾಂಡ್):** ಮಹಿಳಾ ಫಲಾನುಭವಿಯ ಮೊದಲ ಎರಡು ಮಕ್ಕಳಿಗೆ ಹೆಣ್ಣು ಮಗುವಿನ ಜನನಕ್ಕೆ **ರೂ. 30,000/-** ಮತ್ತು ಗಂಡು ಮಗುವಿನ ಜನನಕ್ಕೆ **ರೂ.20,000/-**
9. **ಶಿಶು ಪಾಲನಾ ಸೌಲಭ್ಯ:**
10. **ಅಂತ್ಯಕ್ರಿಯೆ ವೆಚ್ಚ : ರೂ.4,000/-** ಹಾಗೂ ಅನುಗ್ರಹ ರಾಶಿ **ರೂ.50,000/-**ಸಹಾಯಧನ
11. **ಶೈಕ್ಷಣಿಕ ಸಹಾಯಧನ (ಕಲಿಕೆ ಭಾಗ್ಯ): ಫಲಾನುಭವಿಯ ಇಬ್ಬರು ಮಕ್ಕಳ ವಿದ್ಯಾಭ್ಯಾಸಕ್ಕಾಗಿ:**

| ಕ್ರ.ಸಂ | ತರಗತಿ (ಉತ್ತೀರ್ಣಕ್ಕೆ) | |
|---|---|---|
| 1 | ಕೆಜಿ/ ಪೂರ್ವ ಶಾಲೆ /ನರ್ಸರಿ(ವರ್ಷ 3 ರಿಂದ 5) | 5,000 |
| 2 | 1 ರಿಂದ 4ನೇ ತರಗತಿ | 5,000 |
| 3 | 5 ರಿಂದ 8ನೇ ತರಗತಿ | 8,000 |
| 4 | 9 ಹಾಗೂ 10ನೇ ತರಗತಿ | 12,000 |
| | ಪದವಿ ಪೂರ್ವ | |
| 5 | ಪ್ರಥಮ ಪಿಯುಸಿ ಮತ್ತು ದ್ವಿತೀಯ ಪಿ.ಯು.ಸಿ | 15,000 |
| 6 | ಪಾಲಿಟೆಕ್ನಿಕ್ / ಡಿಪ್ಲಮಾ/ ಐಟಿಐ | 20,000 |
| 7 | ಬಿಎಸ್‌ಸಿ ನರ್ಸಿಂಗ್/ ಜಿಎನ್‌ಎಮ್/ | 40,000 |

| | | |
|---|---|---|
| | ಎಎನ್‌ಎಮ್/ ಪಾರಮೆಡಿಕಲ್ ಕೋರ್ಸ್ | |
| 8 | ಡಿ.ಎಡ್ | 25,000 |
| | ಬಿ.ಎಡ್ | 35,000 |
| 9 | ಪದವಿ ಪ್ರತಿ ವರ್ಷಕ್ಕೆ (ಯಾವುದೇ ಪದವಿ) | 25,000 |
| 10 | ಎಲ್‌ಎಲ್‌ಬಿ / ಎಲ್‌ಎಲ್‌ಎಮ್ | 30,000 |
| 11 | ಸ್ನಾತಕೋತ್ತರ ಪದವಿ ಸೇರ್ಪಡೆಗೆ | 35,000 ಗರಿಷ್ಠ 2 ವರ್ಷಅವಧಿಗೆ ಒಳಪಟ್ಟು |
| | **ತಾಂತ್ರೀಕ/ ವೈಧ್ಯಕೀಯ ಎನ್ ಇ ಇ ಟಿ ಅಥವಾ ಕೆ ಸಿ ಇ ಟಿ** | |
| 12 | ಬಿಇ / ಬಿ.ಟೆಕ್ ಅಥವಾ ಸಂಬಂಧಪಟ್ಟ ಯೂ.ಜಿ. ಸಿ. ಕೋರ್ಸ್ | ಸದರಿ ಕೋರ್ಸ್‌ಗಳಿಗೆ ಗರಿಷ್ಠ 2 ವರ್ಷ ಅವಧಿಗೆ ಒಳಪಟ್ಟು ವಾರ್ಷಿಕ ರೂ.50,000 |
| 13 | ಎಮ್.ಟೆಕ್/ ಎಮ್ ಇ ( ಇದಕ್ಕೆ ಸಂಬಂಧಪಟ್ಟ ಸಮಾನಾಂತರ ಸ್ನಾತಕ್ಕೊತ್ತರ ಕೋರ್ಸ್) | ಸದರಿ ಕೋರ್ಸ್‌ನ ಗರಿಷ್ಠ ಅವಧಿಗೆ ಒಳಪಟ್ಟು ವಾರ್ಷಿಕರೂ. 60,000 |
| 14 | ವೈದ್ಯಕೀಯ (ಎಮ್‌ಬಿಬಿಎಸ್ /ಬಿಎಎಮ್‌ಎಸ್ / ಬಿಡಿಎಸ್ /ಬಿಹೆಚ್‌ಎಮ್‌ಎಸ್ ಕೋರ್ಸ್‌ಗೆ ಅಥವಾ ಇದಕ್ಕೆ ಸಂಬಂಧಪಟ್ಟ ಸಮಾನಾಂತರ ಸ್ನಾತಕ್ಕೊತ್ತರ ಕೋರ್ಸ್ | ರೂ.60,000 (ಸದರಿ ಕೋರ್ಸ್‌ನ ಗರಿಷ್ಠ ಅವಧಿಗೆ ಒಳಪಟ್ಟು ) |
| | ಎಮ್‌ಡಿ | ರೂ. 75,000 (ಸದರಿ ಕೋರ್ಸ್‌ನಗರಿಷ್ಠ ಅವಧಿಗೆ ಒಳಪಟ್ಟು) |
| 15 | ಪಿಹೆಚ್‌ಡಿ/ ಎಮ್. ಫಿಲ್ (ಯಾವುದೇ ವಿಷಯ) | ಪಿಹೆಚ್‌ಡಿಗೆ ಗರಿಷ್ಠ ಮೂರು ವರ್ಷಗಳಿಗೆ ಹಾಗೂ ಎಮ್‌ಫಿಲ್‌ಗೆ 1 ವರ್ಷಕ್ಕೆ ಪ್ರತಿ ವರ್ಷ ರೂ. 25,000 (ಯೂಜಿಸಿಯ ಜೂನಿಯರ್ ರಿಸರ್ಚ್ ಫೆಲೋಶಿಫ್‌ಗೆ ಆಯ್ಕೆಯಾಗಿರುವ ಅಭ್ಯರ್ಥಿಗಳು ಹಾಗೂ ಮತ್ತು ರಾಜ್ಯ /ಕೇಂದ್ರ ಸರ್ಕಾರದಲ್ಲಿ ಕೆಲಸ ನಿರ್ವಹಿಸುತ್ತಿರುವ ಅಭ್ಯರ್ಥಿಗಳು ಹಾಗೂ ಯೂಜಿಸಿ ನಿಯಮಗಳನ್ವಯ ವೇತನ |

| | | |
|---|---|---|
| | | ಅನುದಾನಕ್ಕೆ ಒಳಪಡುವ ಹುದ್ದೆಗಳಲ್ಲಿ ಅನುದಾನಿತ ಕಾಲೇಜುಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಅಭ್ಯರ್ಥಿಗಳು ಈ ಸೌಲಭ್ಯವನ್ನು ಪಡೆಯಲು ಅರ್ಹರಿರುವುದಿಲ್ಲ. |
| 16 | ಐಐಟಿ/ಐಐಐಟಿ/ ಐಐಎಮ್/ ಎನ್ಐಟಿ/ ಐಐಎಸ್ಇಆರ್/ ಎಐಐಎಮ್ಎಸ್ /ಎನ್ಎಲ್ಯೂ ಮತ್ತು ಭಾರತ ಸರ್ಕಾರದ ಮಾನ್ಯತೆ ಪಡೆದ ಕೋರ್ಸ್‌ಗಳು | ಪಾವತಿಸಿದ ಬೋಧನಾ ಶುಲ್ಕ |

12. **ವೈದ್ಯಕೀಯ ಸಹಾಯಧನ (ಕಾರ್ಮಿಕ ಆರೋಗ್ಯ ಭಾಗ್ಯ):** ನೋಂದಾಯಿತ ಫಲಾನುಭವಿ ಹಾಗೂ ಅವರ ಅವಲಂಭಿತರಿಗೆ **ರೂ.300/-** ರಿಂದ **ರೂ.10,000/-ವರೆಗೆ**
13. **ಅಪಘಾತ ಪರಿಹಾರ:** ಮರಣ ಹೊಂದಿದ್ದಲ್ಲಿ **ರೂ.5,00,000/-**, ಸಂಪೂರ್ಣ ಶಾಶ್ವತ ದುರ್ಬಲತೆಯಾದಲ್ಲಿ **ರೂ.2,00,000/- ಮತ್ತು** ಭಾಗಶಃ ಶಾಶ್ವತ ದುರ್ಬಲತೆಯಾದಲ್ಲಿ **ರೂ.1,00,000/-**
14. **ಪ್ರಮುಖ ವೈದ್ಯಕೀಯ ವೆಚ್ಚ ಸಹಾಯಧನ (ಕಾರ್ಮಿಕ ಚಿಕಿತ್ಸಾ ಭಾಗ್ಯ):** ಹೃದ್ರೋಗ, ಕಿಡ್ನಿಜೋಡಣೆ, ಕ್ಯಾನ್ಸರ್ ಶಸ್ತ್ರಚಿಕಿತ್ಸೆ, ಕಣ್ಣಿನ ಶಸ್ತ್ರಚಿಕಿತ್ಸೆ, ಪಾರ್ಶ್ವವಾಯು, ಮೂಳೆ ಶಸ್ತ್ರಚಿಕಿತ್ಸೆ, ಗರ್ಭಕೋಶ ಶಸ್ತ್ರಚಿಕಿತ್ಸೆ, ಅಸ್ತಮ ಚಿಕಿತ್ಸೆ, ಗರ್ಭಪಾತ ಪ್ರಕರಣಗಳು, ಪಿತ್ತಕೋಶದತೊಂದರೆಗೆ ಸಂಬಂಧಿತಚಿಕಿತ್ಸೆ, ಮೂತ್ರ ಪಿಂಡದಲ್ಲಿನ ಕಲ್ಲುತೆಗೆಯುವ ಚಿಕಿತ್ಸೆ, ಮೆದುಳಿನ ರಕ್ತಸ್ರಾವದ ಚಿಕಿತ್ಸೆ, ಅಲ್ಸರ್ ಚಿಕಿತ್ಸೆ, ಡಯಾಲಿಸಿಸ್ ಚಿಕಿತ್ಸೆ, ಕಿಡ್ನಿ ಶಸ್ತ್ರಚಿಕಿತ್ಸೆ, ಇ.ಎನ್.ಟಿ. ಚಿಕಿತ್ಸೆ ಮತ್ತು ಶಸ್ತ್ರಚಿಕಿತ್ಸೆ, ನರರೋಗ ಶಸ್ತ್ರಚಿಕಿತ್ಸೆ, ವ್ಯಾಸ್ಕ್ಯುಲರ್ ಶಸ್ತ್ರಚಿಕಿತ್ಸೆ, ಅನ್ನನಾಳದ ಚಿಕಿತ್ಸೆ ಮತ್ತು ಶಸ್ತ್ರಚಿಕಿತ್ಸೆ, ಕರುಳಿನ ಶಸ್ತ್ರಚಿಕಿತ್ಸೆ, ಸ್ತನ ಸಂಬಂಧಿತ ಚಿಕಿತ್ಸೆ ಮತ್ತು ಶಸ್ತ್ರಚಿಕಿತ್ಸೆ, ಹರ್ನಿಯ ಶಸ್ತ್ರಚಿಕಿತ್ಸೆ, ಅಪೆಂಡಿಕ್ಸ್ ಶಸ್ತ್ರಚಿಕಿತ್ಸೆ, ಮೂಳೆ ಮುರಿತ/ಡಿಸ್‌ಲೊಕೇಶನ್ ಚಿಕಿತ್ಸೆ, ಇತರೆ ಔದ್ಯೋಗಿಕ ಖಾಯಿಲೆಗಳ ಚಿಕಿತ್ಸೆಗಳಿಗೆ **ರೂ.2,00,000/-**ವರೆಗೆ.
15. **ಮದುವೆ ಸಹಾಯಧನ (ಗೃಹ ಲಕ್ಷ್ಮೀ ಬಾಂಡ್):** ಫಲಾನುಭವಿ ಅಥವಾ ಅವರ ಇಬ್ಬರು ಮಕ್ಕಳ ಮದುವೆಗೆ ತಲಾ **ರೂ.50,000/-**
16. ಮಂಡಳಿಯ ಫಲಾನುಭವಿಗಳ ಮಕ್ಕಳು ಐಎಎಸ್/ ಕೆಎಎಸ್ ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಭಾಗವಹಿಸಲು ತರಬೇತಿ.
17. **ಬಿಎಂಟಿಸಿ ಬಸ್ ಪಾಸ್ ಸೌಲಭ್ಯ:** ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಕೆಲಸ ಮಾಡುತ್ತಿರುವಂತಹ / ವಾಸಸ್ಥಳದಿಂದ ಬೆಂಗಳೂರಿಗೆ ಪ್ರಯಾಣಿಸುವ ನೋಂದಾಯಿತ ಕಟ್ಟಡ ಕಾರ್ಮಿಕರಿಗೆ
18. **ಕೆಎಸ್ಆರ್‌ಟಿಸಿ ಬಸ್ ಪಾಸ್‌ನ ಸೌಲಭ್ಯ:** ರಾಜ್ಯದಾದ್ಯಂತ ವಿದ್ಯಾಭ್ಯಾಸದಲ್ಲಿ ತೊಡಗಿರುವ ನೋಂದಾಯಿತ ಕಾರ್ಮಿಕರ ಇಬ್ಬರು ಮಕ್ಕಳಿಗೆ ( ಈ ಯೋಜನೆಯನ್ನು ಜಾರಿಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ)
19. **ತಾಯಿ ಮಗು ಸಹಾಯ ಹಸ್ತ:** ಮಹಿಳಾ ಫಲಾನುಭವಿಯು ಮಗುವಿಗೆ ಜನ್ಮ ನೀಡಿದ ಸಂದರ್ಭದಲ್ಲಿ ಆಕೆಯ ಮಗುವಿನ ಶಾಲಾ ಪೂರ್ವ ಶಿಕ್ಷಣ ಮತ್ತು ಪೌಷ್ಟಿಕತೆಗಾಗಿ ಮಗುವಿಗೆ ಮೂರು ವರ್ಷಗಳು ತುಂಬುವವರೆಗೆ ವಾರ್ಷಿಕ **ರೂ.6,000/-** ಗಳ ಸಹಾಯ ಧನ.

## ಅನುಬಂಧ-2

ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಅರವಿಂದ ಕುಮಾರ್ ಅರಳಿ ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: **2622** ಕ್ಕೆ

ಕಳೆದ ಮೂರು ವರ್ಷದಲ್ಲಿ ಬೀದರ್ ಜಿಲ್ಲೆಯಲ್ಲಿ ವಿವಿಧ ಸೌಲಭ್ಯಗಳಡಿ ಸಹಾಯಧನ ಪಡೆದ ತಾಲ್ಲೂಕುವಾರು ವಿವರ

| ಕ್ರಮ ಸಂಖ್ಯೆ | ಕಾರ್ಮಿಕ ನೀರಿಕ್ಷಕರ ವೃತ್ತ | ಮದುವೆ ಸಹಾಯಧನ | ಶೈಕ್ಷಣಿಕ ಸಹಾಯಧನ | ಹೆರಿಗೆ ಸಹಾಯಧನ | ವೈದ್ಯಕಿಯ/ಪ್ರಮುಖ ವೈದ್ಯಕಿಯ ಸಹಾಯಧನ | ಪಿಂಚಣಿ | ಅಂತ್ಯಕ್ರಿಯೆ | ಅಪಘಾತ |
|---|---|---|---|---|---|---|---|---|
| 1 | ಔರಾದ ವೃತ್ತ | 856 | 5628 | 34 | 9 | **13** | 128 | 0 |
| 2 | ಭಾಲ್ಕಿ ವೃತ್ತ | 574 | 5968 | 80 | 5 | 11 | 133 | 0 |
| 3 | ಹುಮನಾಬಾದ ವೃತ್ತ | 359 | 4517 | 13 | 7 | 06 | 110 | 0 |
| 4 | ಬಸವಕಲ್ಯಾಣ ವೃತ್ತ | 256 | 2560 | 15 | 2 | 02 | 67 | 0 |
| 5 | ಬೀದರ್ ವೃತ್ತ | 3871 | 17586 | 333 | 53 | 19 | 237 | 04 |
| | ಒಟ್ಟು | **3916** | **36259** | **475** | **76** | **51** | **675** | **04** |

## ಅನುಬಂಧ-3

### ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಅರವಿಂದ ಕುಮಾರ್ ಅರಳಿ ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 2622 ಕ್ಕೆ

ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿ ವತಿಯಿಂದ 2018-19ನೇ ಸಾಲಿನಿಂದ 2020-21ನೇ ಸಾಲಿನವರೆಗೆ ಬೀದರ್ ಜಿಲ್ಲೆಯ ವಿವಿಧ ತಾಲ್ಲೂಕುಗಳಲ್ಲಿ ಕಾರ್ಮಿಕ ಕಲ್ಯಾಣ ಯೋಜನೆಗಳಡಿ ಸೌಲಭ್ಯ ನೀಡಿರುವ ತಾಲ್ಲೂಕುವಾರು ವಿವರ ಈ ಕೆಳಕಂಡಂತಿದೆ.

| ಕ್ರ ಸಂ. | ತಾಲ್ಲೂಕು | 2018-19 | | 2019-20 | | 2020-21 | |
|---|---|---|---|---|---|---|---|
| | | ಫಲಾನುಭವಿಗಳ ಸಂಖ್ಯೆ | ಮೊತ್ತ | ಫಲಾನುಭವಿಗಳ ಸಂಖ್ಯೆ | ಮೊತ್ತ | ಫಲಾನುಭವಿಗಳ ಸಂಖ್ಯೆ | ಮೊತ್ತ |
| 1 | ಬೀದರ್ | 27 | 142000 | 10 | 47000 | 13 | 61000 |
| 2 | ಹುಮ್ನಾಬಾದ್ | 10 | 50000 | 9 | 45000 | 15 | 75000 |
| 3 | ಭಾಲ್ಕಿ | 0 | 0 | 0 | 0 | 4 | 20000 |
| 4 | ಔರಾದ್ | 0 | 0 | 0 | 0 | 2 | 10000 |
| 5 | ಹುಲ್ಸೂರ್ | 0 | 0 | 0 | 0 | 0 | 0 |
| 6 | ಚಿಟಗುಪ್ಪ | 0 | 0 | 0 | 0 | 0 | 0 |
| 7 | ಕಮಲಾನಗರ | 0 | 0 | 0 | 0 | 0 | 0 |
| 8 | ಬಸವಕಲ್ಯಾಣ | 0 | 0 | 0 | 0 | 5 | 25000 |
| | **ಒಟ್ಟು** | **37** | **192000** | **19** | **92000** | **39** | **191000** |